6. ಸಭೆಯ ಮುಂದಿಡಲಾದ ಕಾಗದಪತ್ರಗಳು

ಶ್ರೀ ಎಸ್.ಎಂ.ಕೃಷ್ಣ (ಮುಖ್ಯಮಂತ್ರಿಗಳು) :— ಮಾನ್ಯ ಅಧ್ಯಕ್ಷರೆ, ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ 31ನೇ ಮಾರ್ಚ್, 2000ರಂದು ಕೊನೆಗೊಂಡ ವರ್ಷಕ್ಕೆ ಭಾರತದ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ಲೆಕ್ಕ ಪರಿಶೋಧನಾ ವರದಿ ಸಂಖ್ಯೆ-1(ವಾಣಿಜ್ಯ) ಅನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು :— ಮಂಡಿಸಲಾಯಿತು.

7. ಶಾಸನ ರಚನೆ

ವಿಧೇಯಕಗಳನ್ನು ಮಂಡಿಸುವುದು

ಕರ್ನಾಟಕ ವಿದ್ಯುಚ್ಛಕ್ತಿ ಸುಧಾರಣಾ (ತಿದ್ದುಪಡಿ) ವಿಧೇಯಕ, 2001

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ವೀರಕುಮಾರ್ ಪಾಟೀಲ್ (ಇಂಧನ ರಾಜ್ಯ ಸಚಿವರು) ಮಾನ್ಯ ಅಧ್ಯಕ್ಷರೆ, 2001 ರ ಕರ್ನಾಟಕ ವಿದ್ಯುಚ್ಛಕ್ತಿ ಸುಧಾರಣಾ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು :— ಪ್ರಸ್ತಾವ ಏನೆಂದರೆ

"2001ರ ಕರ್ನಾಟಕ ವಿದ್ಯುಚ್ಛಕ್ತಿ ಸುಧಾರಣಾ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ವೀರಕುಮಾರ್ ಪಾಟೀಲ್ (ಇಂಧನ ರಾಜ್ಯ ಸಚಿವರು) :— ಮಾನ್ಯ ಅಧ್ಯಕ್ಷರೆ, 2001ರ ಕರ್ನಾಟಕ ವಿದ್ಯುಚ್ಛಕ್ತಿ ಸುಧಾರಣಾ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು :— ವಿಧೇಯಕವನ್ನು ಮಂಡಿಸಲಾಗಿದೆ. **ಅನುಬಂಧ-1**

ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿ (ಬಾಕಿಗಳ ವಸೂಲಿ) ಮತ್ತು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2001

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ವೀರಕುಮಾರ್ ಪಾಟೀಲ್ (ಇಂಧನ ರಾಜ್ಯ ಸಚಿವರು) :— ಮಾನ್ಯ ಅಧ್ಯಕ್ಷರೆ, 2001 ರ ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿ (ಬಾಕಿಗಳ ವಸೂಲಿ) ಮತ್ತು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು :— ಪ್ರಸ್ತಾವ ಏನೆಂದರೆ

2001ರ ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿ(ಬಾಕಿಗಳ ವಸೂಲಿ) ಮತ್ತು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ವೀರಕುಮಾರ್ ಪಾಟೀಲ್ (ಇಂಧನ ರಾಜ್ಯಸಚಿವರು) :— ಮಾನ್ಯ ಅಧ್ಯಕ್ಷರೆ, 2001ರ ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿ (ಬಾಕಿಗಳ ವಸೂಲಿ) ಮತ್ತು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು :— ವಿಧೇಯಕವನ್ನು ಮಂಡಿಸಲಾಗಿದೆ. **ಅನುಬಂಧ II**

8. ವಿತ್ತೀಯ ಕಾರ್ಯಕಲಾಪಗಳು

2001-2002ನೇ ಸಾಲಿನ ಅನುದಾನ ಬೇಡಿಕೆಗಳ ಮೇಲಿನ ಚರ್ಚೆ

ಕೃಷಿ, ತೋಟಗಾರಿಕೆ, ಆರೋಗ್ಯ ಮತ್ತು ಇವರ ಬೇಡಿಕೆಗಳ ಮೇಲಿನ ಚರ್ಚೆ

+ ಶ್ರೀ ಕೆ.ಹೆಚ್. ಹನುಮೇಗೌಡ (ಹಾಸನ) :— ಮಾನ್ಯ ಅಧ್ಯಕ್ಷರೆ, ಕೃಷಿ, ತೋಟಗಾರಿಕೆ, ಆರೋಗ್ಯ ಮತ್ತು ಇತರೆ ಬೇಡಿಕೆಗಳ ಬಗ್ಗೆ ಕೆಲವು ವಿಚಾರಗಳನ್ನು ತಿಳಿಸುವುದಕ್ಕೆ ನಾನು ಇಷ್ಟಪಡುತ್ತೇನೆ. ದೇಶಕ್ಕೆ ಸ್ವಾತಂತ್ರ್ಯ ಬಂದು 50 ವರ್ಷಗಳಿಂದ ಜಾಸ್ತಿಯಾಯಿತು. ಪಟ್ಟಣಗಳು ಯಾವ ರೀತಿ ಬೆಳೆದಿವೆ, ಪಟ್ಟಣಗಳಲ್ಲಿ ಏನು ಅನುಕೂಲಗಳು ಆಗಿವೆ, ಪಟ್ಟಣದಲ್ಲಿರತಕ್ಕಂಥ ಸಾರ್ವಜನಿಕರಿಗೆ ಏನೇನು ಅನುಕೂಲಗಳಾಗಿವೆ ಹಾಗೆಯೇ ಗ್ರಾಮಾಂತರ ಪ್ರದೇಶದಲ್ಲಿರತಕ್ಕಂಥ, ರೈತರು ವಾಸ ಮಾಡುತ್ತಿರತಕ್ಕಂಥ ಪ್ರದೇಶದಲ್ಲಿ ಏನೇನು ಅನುಕೂಲಗಳನ್ನು ಪದೇ ಪದೇ ಬಂದಂಥ ಸರ್ಕಾರಗಳು ಏನು ಮಾಡಿದೆ ಎನ್ನುವುದರ ಬಗ್ಗೆ ಈ ಸರ್ಕಾರ ಚಿಂತನೆ ಮಾಡಬೇಕೆಂದು ಈ ಸಂದರ್ಭದಲ್ಲಿ ಹೇಳುವುದಕ್ಕೆ ಇಚ್ಛಿಪಡುತ್ತೇನೆ.